ಕರ್ನಾಟಕ ಸರಕಾರ
ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ
ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ: 27-1-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | "ಸುರಕ್ಷತೆ ಕೇವಲ ಘೋಷಣೆ ಅಲ್ಲ, ಅದು ಜೀವನ ಶೈಲಿ" ಬೆಂಗಳೂರು ನಗರ ಸಂಚಾರ ಪೊಲೀಸ್ ಮತ್ತು ಸಾರಿಗೆ ಇಲಾಖೆಯಿಂದ 26 ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹದ ಉದ್ಘಾಟನಾ ಸಮಾರಂಭ-2015<br><br>ಉದ್ಘಾಟನೆ:<br><br>ಶ್ರೀ ಕೆ.ಜೆ. ಜಾರ್ಜ್,<br>ಗೃಹ ಸಚಿವರು<br><br>ಮುಖ್ಯ ಅತಿಥಿಗಳು:<br><br>ಶ್ರೀ ರಾಮಲಿಂಗಾರೆಡ್ಡಿ,<br>ಸಾರಿಗೆ ಸಚಿವರು<br><br>ಅಧ್ಯಕ್ಷತೆ:<br>ಶ್ರೀ ಆರ್. ರೋಷನ್ ಬೇಗ್,<br>ಮೂಲಸೌಕರ್ಯ ಅಭಿವೃದ್ಧಿ ಮಾಹಿತಿ ಮತ್ತು ಹಜ್ ಸಚಿವರು | 28-1-2015<br>ಬುಧವಾರ<br>ಬೆಳಗ್ಗೆ<br>10-30 ಗಂಟೆಗೆ | ಕಂಠೀರವ ಕ್ರೀಡಾಂಗಣ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ವಿದ್ಯುತ್ ದರ ಪರಿಷ್ಕರಣೆ: ಸಾರ್ವಜನಿಕ ವಿಚಾರಣೆ

**ಬೆಂಗಳೂರು, ಜ. 27 (ಕನಾ□ಟಕ ವಾತೆ□) :**

ಕರ್ನಾಟಕ ವಿದ್ಯುತ್ ಪ್ರಸರಣಾ ನಿಮಗವು 2015–16 ನೇ ಸಾಲಿನ ವಿದ್ಯುತ್ ದರ ಪರಿಷ್ಕರಣೆಗಾಗಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಸಲ್ಲಿಸಿರುವ ಅರ್ಜಿಯ ವಿಚಾರಣೆಗಾಗಿ ಫೆಬ್ರವರಿ 6 ರಂದು ಬೆಳಿಗ್ಗೆ 11 ಗಂಟೆಗೆ ಹಾಗೂ ವಿದ್ಯುತ್ ಪ್ರಸರಣಾ ನಿಗಮ ನಿಯಮತ ಸಲ್ಲಿಸಿರುವ ಅರ್ಜಿಯ ವಿಚಾರಣೆಗಾಗಿ ಅದೇ ದಿನ ಮದ್ಯಾಹ್ನ 3–00 ಗಂಟೆಗೆ ಬೆಂಗಳೂರು ಮಹಾತ್ಮಾಗಾಂಧಿ ರಸ್ತೆಯಲ್ಲಿರುವ ಮಹಾಲಕ್ಷ್ಮೀ ಛೇಂಬರ್ಸ್‌ನ 6 ನೇ ಮಹಡಿಯ ಕರ್ನಾಕ ವಿದ್ಯುಚ್ಛಕ್ತಿ ನಿಯಂತ್ರಣದ ಆಯೋಗದ ನ್ಯಾಯಾಂಗಣದಲ್ಲಿ ವಿಚಾರಣೆ ನಡೆಸಲಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.
ಬಾಬು/ಕೆಎಂ

## ಸಮ್ಮೇಳನ

**ಬೆಂಗಳೂರು, ಜ. 27 (ಕನಾ□ಟಕ ವಾತೆ□) :**

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ 7 ನೇ ವಾರ್ಷಿಕ ಸಮ್ಮೇಳನವನ್ನು ಬೆಂಗಳೂರಿನ ಹೆಚ್.ಎಸ್.ಆರ್. ಲೇಔಟ್‌ನಲ್ಲಿರುವ ಆಕ್ಸ್‌ಫರ್ಡ್ ಕಾಲೇಜಿನ ಸಹಯೋಗದೊಡನೆ ಫೆಬ್ರವರಿ 5 ಮತ್ತು 6 ರಂದು ಎರಡು ದಿನಗಳ ವಿಜ್ಞಾನ, ತಂತ್ರಜ್ಞಾನ ಮತ್ತು ಉನ್ನತೀಕರಣ– ಪ್ರಗತಿಗೆ ಒಂದು ಸಾಧನ ಎಂಬ ಕೇಂದ್ರ ವಿಷಯದಡಿ ಪ್ರಧಾನ ಸಮ್ಮೇಳನವನ್ನು ಆಯೋಜಿಸಿದೆ. ಹೆಚ್ಚಿನ ವಿವರಗಳನ್ನು ಆಕ್ಸ್‌ಫರ್ಡ್ ಕಾಲೇಜಿನ http://www.theoxford.edu/ ನಿಂದ ಪಡೆಯಬಹುದಾಗಿದೆ.
ಬಾಬು/ಕೆಎಂ

# ಪುಸ್ತಕ ಪ್ರಕಾಶನ ನೋಂದಣಿ

**ಬೆಂಗಳೂರು, ಜನವರಿ 27 (ಕರ್ನಾಟಕ ವಾರ್ತೆ)**

**ಕನ್ನಡ ಪುಸ್ತಕ ಪ್ರಾಧಿಕಾಖುವು ಕನ್ನಡ ಸಾಹಿತ್ಯ ಕ್ಷೇತ್ರದಲ್ಲ ಪುಸ್ತಕಗಳ ಬಗ್ಗೆ ಸಾರ್ವಜನಿಕರಲ್ಲಿ ಆಸಕ್ತಿಯನ್ನು, ಓದುವ ಮನೋಭಾವವನ್ನು ಮೂಡಿಸುವ ಸಂಬಂಧವಾಗಿ ಹಲವಾರು ಯೋಜನೆಗಳನ್ನು ಹಮ್ಮಿಕೊಂಡು ಅನುಷ್ಠಾನಕ್ಕೆ ತರುತ್ತಿವೆ.**

**ರಾಜ್ಯದಲ್ಲಿ ನೂರಾರು ಪ್ರಕಾಶಕರು ಇದ್ದು, ದಿನವಹಿ, ಹತ್ತಾರು ಪುಸ್ತಕಗಳ ಪ್ರಕಟಣೆಯಾಗುತ್ತಿದೆ. ರಾಜ್ಯದಲ್ಲಿ ಪ್ರಕಟಿತ ಪುಸ್ತಕಗಳ ಹಾಗು ಪುಸ್ತಕ ಪ್ರಕಾಶಕರ ವಿವರಗಳು ಒಂದೆಡೆ ಲಭ್ಯವಾದಲ್ಲ ಸಾಹಿತ್ಯಾಸಕ್ತರಿಗೆ ಅನುಕೂಲವಾಗುವ ದೃಷ್ಟಿಕೋನದಿಂದ ಕನ್ನಡ ಪುಸ್ತಕ ಪ್ರಾಧಿಕಾರವು ಪ್ರಕಾಶಕರ ನೋಂದಣಿ ಯೋಜನೆಯೊಂದನ್ನು ಆರಂಭಿಸುತ್ತಿದೆ. ಈ ದಿಸೆಯಲ್ಲಿ ರಾಜ್ಯದೆಲ್ಲೆಡೆಯಲ್ಲಿರುವ ಪ್ರಕಶಕರು ತಮ್ಮ ಹೆಸರು/ವಿವರಗಳು ಮತ್ತು ತಮ್ಮಿಂದ ಈವರೆಗೆ ಪ್ರಕಟಿತವಾಗಿರುವ ಎಲ್ಲಾ ಪುಸ್ತಕಗಳ ಶೀರ್ಷಿಕೆ, ಪುಟಸಂಖ್ಯೆ, ಬೆಲೆ, ರಿಯಾಯಿತಿ ದರ ಇತ್ಯಾದಿಗಳ ವಿವರಗಲನ್ನು ತಮ್ಮ ಎರಡು ಇತ್ತೀಚಿನ ಸ್ಟಾಂಪ್ ಸೈಜ್**

ಭಾವಚಿತ್ರದೊಂದಿಗೆ ಅರ್ಜಿಗಳನ್ನು ದಿನಾಂಕ 18-2-2015 ರೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು -560 002 ಅವರಿಗೆ ಕಳುಹಿಸಿಕೊಡಲು ಕೋರಿದೆ.

ಈ ಸಂಬಂಧ ಅರ್ಜಿ ನಮೂನೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲಾ ಸಹಾಯಕರ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದಾಗಿದೆ. ಅಲ್ಲದೆ ಪ್ರಾಧಿಕಾರದ ವೆಬ್‌ಸೈಟ್ www.kannadapusthakapradhikara.com ನಲ್ಲಿ ಪಡೆಯಬಹುದಾಗಿದೆ. ವಿವರಗಳನ್ನು ಪ್ರಾಧಿಕಾರದ email ID: kannadappradhikara@gmail.com ಕಳುಹಿಸಿ, ನಂತರ ಭಾವಚಿತ್ರದೊಂದಿಗೆ ಅರ್ಜಿಯನ್ನು ಅಂಚೆ ಮೂಲಕ ರವಾನಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿ, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು ದೂರವಾಣಿ 080-22484516 ಇಲ್ಲಿ ಸಂಪರ್ಕಿಸಬಹುದು.

ಬಾಬು/ಕೆಎಂ.

# ಸೈನಿಕ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಜನವರಿ 27 (ಕರ್ನಾಟಕ ವಾರ್ತೆ)

2016 ನೇ ಜನವರಿ ಅಧಿವೇಶನಕ್ಕಾಗಿ ಉತ್ತರಾಖಾಂಡ ರಾಜ್ಯದ ಡೆಹರಾಡೂನ್‌ನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜಿನಲ್ಲಿ 8 ನೇ ತರಗತಿ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕರ ಅರ್ಹತಾ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ 2015 ರ ಜೂನ್ 1 ಮತ್ತು 2 ರಂದು ನಡೆಸಲಾಗುವುದು. ಭರ್ತಿ ಮಾಡಿದ ನಿಗಧಿತ ಅರ್ಜಿಯನ್ನು ದ್ವಿ ಪ್ರತಿಯಲ್ಲಿ ಅಗತ್ಯ ಅಡಕಗಳೊಂದಿಗೆ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವತಿ ಇಲಾಖೆ, ಬೆಂಗಳೂರು ಇವರಿಗೆ 31-3-2015 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080-25589459 ಅಥವಾ ತಮ್ಮ ಸಮೀಪದ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಚೇರಿ ಸಂಪಕಿಸಲು ಕೋರಿದೆ.

ಬಾಬು/ಕೆಎಂ

# ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು, ಜ. 27 (ಕನಾ□ಟಕ ವಾತೆ□) :

ಕರ್ನಾಟಕ ಲೋಕಸೇವಾ ಆಯೋಗವು ಜಲ ಸಂಪನ್ಮೂಲ ಇಲಾಖೆಯಲ್ಲಿ 365 ಸಹಾಯಕ ಇಂಜಿನಿಯರ್ (ಸಿವಿಲ್) 40, ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್) 131 ಕಿರಿಯ ಇಂಜಿನಿಯರ್ (ಸಿವಿಲ್) ಮತ್ತು 14 ಕಿರಿಯ ಇಂಜಿನಿಯರ್ (ಮೆಕ್ಯಾನಿಕಲ್) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ಜನವರಿ 24 ರಂದು ಆಯೋಗದ ಅಂತರ್ಜಾಲ "http://kpsc.kar.nic.in " ದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಕ್ಷೇಪಣೆಗಳನ್ನು ಈ ಆಯ್ಕೆಪಟ್ಟಿಗಳನ್ನು ಪ್ರಕಟಿಸಿದ ದಿನಾಂಕದಿಂದ 07 ದಿನಗಳೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು -560 001 ಇವರಿಗೆ ಸಲ್ಲಿಸಬಹುದು.

ಬಾಬು/ಕೆಎಂ

**ಛಾಯಾಚಿತ್ರ ಶೀರ್ಷಿಕೆ:**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪರಿಶಿಷ್ಠಜಾತಿ-ಪರಿಶಿಷ್ಠ ಪಂಗಡ ಮತ್ತು ಹಿಂದುಳಿದ ವರ್ಗದ ಪದವಿ ವಿದ್ಯಾರ್ಥಿಗಳಿಗಾಗಿ ಒಂದು ವಾರ ಕಾಲ ಏರ್ಪಡಿಸಿರುವ ವೃತ್ತಿ ಹಾಗೂ ನಿರೂಪಣಾ ಕೌಶಲ್ಯ ತರಬೇತಿಯಲ್ಲಿ ಹಿರಿಯ ಪತ್ರಕರ್ತ ಶಿವಾಜಿಗಣೇಶನ್, ಎನ್.ಎಸ್. ಶಂಕರ್, ಜಂಟಿ ನಿರ್ದೇಶಕ ಎನ್. ಭೃಂಗೀಶ್ ಅವರು ಚಿತ್ರದಲ್ಲಿದ್ದಾರೆ.**